# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1532 |
| ಉತ್ತರಿಸಬೇಕಾದ ದಿನಾಂಕ | : | 24.09.2021. |
| ಸದಸ್ಯರ ಹೆಸರು | : | ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕ್ರೀಡಾ ಇಲಾಖೆಗೆ ಕೇಂದ್ರದಿಂದ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಯೋಜನೆಗಳಾವುವು; (ವಿವರಗಳನ್ನು ಒದಗಿಸುವುದು) | 2018-19ನೇ ಸಾಲಿನಲ್ಲಿ ಹುಬ್ಬಳ್ಳಿ- ಧಾರವಾಡ ಜಿಲ್ಲೆಯಲ್ಲಿ ಬಹು ಉದ್ದೇಶಿತ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಮಾಡಲು ರೂ. 800.00 ಲಕ್ಷಗಳಿಗೆ ಮಂಜೂರಾತಿ ನೀಡಿ ರೂ. 300.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br>2019-20 ನೇ ಸಾಲಿನಲ್ಲಿ ಯಾವುದೇ ಯೋಜನೆಗಳು ಮಂಜೂರು ಮಾಡಿರುವುದಿಲ್ಲ.<br>2020-21ನೇ ಸಾಲಿನಲ್ಲಿ ಖೇಲೋ ಇಂಡಿಯಾ ಸ್ಟೇಟ್ ಸೆಂಟರ್ ಆಫ್ ಎಕ್ಸಲೆನ್ಸ್‌ನ ಕಾರ್ಯಾಚರಣೆಗೆ ರೂ. 219.27 ಲಕ್ಷ ಅನುದಾನ ಹಂಚಿಕೆ ಮಾಡಲಾಗಿದೆ ಮತ್ತು ರೂ.1,01,89,800/- ಅನುದಾನವನ್ನು ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯ ವತಿಯಿಂದ ಬಿಡುಗಡೆ ಮಾಡಲಾಗಿದೆ.<br>ಮುಂದುವರೆದು, ಸದರಿ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 4.50 ಕೋಟಿಗಳ ವಿವಿದೋದ್ದೇಶ ಒಳಾಂಗಣ ಹಾಲ್ ನಿರ್ಮಾಣ; ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 7.00 ಕೋಟಿಗಳ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್; ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 4.50 ಕೋಟಿಗಳ ವಿವಿದೋದ್ದೇಶ ಹಾಲ್ ನಿರ್ಮಾಣ; ಉಡುಪಿ ಜಿಲ್ಲೆಯ ಕಾರ್ಕಳ ನಗರದಲ್ಲಿ ರೂ. 3.50 ಕೋಟಿಗಳ ಕ್ರೀಡಾ ಸಂಕೀರ್ಣ ನಿರ್ಮಾಣ ಹಾಗೂ ಉಡುಪಿ ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 2.32 ಕೋಟಿಗಳ Construction of Tensile structural roofing and Construction of gallery roofing ಕಾಮಗಾರಿಗಳಿಗೆ ಮಂಜೂರಾತಿ ನೀಡಿದ್ದು ಈ ಪೈಕಿ ಚಿಕ್ಕಮಗಳೂರು ಹಾಗೂ ಕೊಪ್ಪಳ ಜಿಲ್ಲೆಗಳ ಕಾಮಗಾರಿಗಳ ಸಂಬಂಧಿಸಿದ ದಾಖಲಾತಿಗಳನ್ನು ಭಾರತ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. |

| | | |
|---|---|---|
| ಆ) | ಕೋವಿಡ್-19 ನಿಂದಾಗಿ ಯೋಜನೆಗಳ ಮೇಲೆ ಪರಿಣಾಮ ಬೀರಿದೆಯೇ; | ಹೌದು, ಕೋವಿಡ್ ನಿಂದಾಗಿ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗಿರುತ್ತದೆ. |
| ಇ) | 2021-22ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು?(ಮಾಹಿತಿ ನೀಡುವುದು) | ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯ ವತಿಯಿಂದ ರಾಜ್ಯದಲ್ಲಿ 2021-22 ನೇ ಸಾಲಿಗೆ 31 ಸಣ್ಣ ಖೇಲೋ ಇಂಡಿಯಾ ಕೇಂದ್ರಗಳಿಗೆ ಮಂಜೂರಾತಿ ನೀಡಿ ರೂ. 2.17 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

**ವೈಎಸ್‌ಡಿ/ಇಬಿಬಿ/164/2021**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.